ಅ) ಸರ್ಕಾರಿ ವೈದ್ಯರು ಖಾಸಗಿ ನರ್ಸಿಂಗ್ ಹೋಂಗಳಲ್ಲಿ ಕೆಲಸ ಮಾಡುತ್ತಿರುವುದನ್ನು ಅಪರಾಧವೆಂದು ಪರಿಗಣಿಸಿದೆಯೇ;

ಆ) ಕಳೆದ 2 ವರ್ಷಗಳಲ್ಲಿ ಇಂತಹ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ;

ಇ) ಇದನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು?

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಬೆಂಗಳೂರು ನಗರದಲ್ಲಿರುವ ಶಾಲಾ ಕಾಲೇಜುಗಳಿಗೆ ಪ್ರವೇಶ

2623(3015) ಶ್ರೀ ಸುರೇಶ್ ಕುಮಾರ್ ಎಸ್. (ರಾಜಾಜಿನಗರ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೆಂಗಳೂರು ನಗರದಲ್ಲಿರುವ ಖಾಸಗಿ ಶಾಲೆ ಕಾಲೇಜುಗಳಲ್ಲಿ ಪ್ರವೇಶ ಪಡೆಯುವುದಕ್ಕೆ ವಿದ್ಯಾರ್ಥಿಗಳು ಹಾಗೂ ಪೋಷಕರು ಪಡುತ್ತಿರುವ ಬವಮೆ ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಈ ಬವಣೆ ತಪ್ಪಿಸಲು ಪ್ರವೇಶ ನೀತಿ ಘೋಷಿಸಲು ಸರ್ಕಾರ ಯೋಚಿಸಿದೆಯೇ;

ಇ) ಆಯಾ ಶಾಲಾ ಕಾಲೇಜುಗಳ ಸುತ್ತ ಮುತ್ತ ಇರುವ ಸ್ಥಳೀಯರಿಗೆ ಆದ್ಯತೆ ಕುರಿತು ಸರ್ಕಾರ ಯೋಚಿಸುತ್ತಿದೆಯೇ;

ಶ್ರೀ ಹೆಚ್. ವಿಶ್ವನಾಥ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಸಾಕಷ್ಟು ಸಂಖ್ಯೆಯ ಶಾಲಾ ಕಾಲೇಜುಗಳು ಇದ್ದು ಪ್ರವೇಶ ಅವಕಾಶಕ್ಕೆ ತೊಂದರೆಯಾಗುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಅಂತಹ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ.